1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ. **503/2023**

ಹೆಸರುಃ ಮಂಜುನಾಥ ಚಾಸಾಃ 2

ತಂದೆಃ ಹನುಮಂತಪ್ಪ ಪ್ರಾಸಾ: 5

ವಯಸ್ಸುಃ 26 ವರ್ಷ

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ ಕೊಟ್ಟಿಕಿಕೆರೆ ಗ್ರಾಮ , ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 13-08-2025 ರಂದು ಪ್ರಮಾಣ ವಚನ ಭೋಧಿಸಲಾಯಿತು .

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಕೃತ್ಯ ನಡೆದ ಸ್ಥಳ ಮತ್ತು ಅಮಾನತುಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಶಾನೆ.ಪಿ.1 ಎಂದು ಗುರುತಿಸಲಾಯಿತು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ.ಪಿ.1 (ಡಿ) ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ, ಸದರಿ ದಾಖಲೆಗೆ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯನ್ನು ಯಾರು ಎಲ್ಲಿ, ಯಾವಾಗ ಯಾವ ಕಾರಣಕ್ಕಾಗಿ ಬರೆದರು ಎಂದು ನನಗೆ ಗೊತ್ತಿಲ್ಲ, ಸದರಿ ದಾಖಲೆಗೆ ಬೇರೆಯಾರು ನನ್ನ ಜೊತೆ ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ, ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ನಾನು ಅರೋಪಿತರನ್ನು ನೋಡಿಲ್ಲ.

ಮಹಜರ್ ಸಮಯದಲ್ಲಿ ಪೊಲೀಸರು ಮೂರು ಭಾವಚಿತ್ರಗಳನ್ನು ತೆಗೆದಿರುತ್ತಾರೆ . ಸದರಿ ಭಾವಚಿತ್ರವನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ . ಸದರಿ ಭಾವಚಿತ್ರಗಳನ್ನು ಈಗಾಗಲೇ ನಿಪಿ.2 ರಿಂದ 4 ಎಂದು ಗುರುತಿಸಲಾಯಿತು . ಸದರಿ ಪೊಟೋಗಳನ್ನು ಯಾರು, ಯಾವಾಗ, ಯಾವ ಕಾರಣಕ್ಕಾಗಿ ತೆಗೆದರು ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಮಹಜರ್ ಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಮಹಜರ್ ನ್ನು ನೋಡಲಾಗಿ ಸಾಕ್ಷಿಯು ಮಹಜರ್ ಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿನಾಂಕಃ 13-06-2022 ರಂದು ಚಾಸಾ-1 ರವರು ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ಪೊಲೀಸಿನವರು ಮಧ್ಯಾಹ್ನ 3-45 ರಿಂದ 5-00 ಗಂಟೆವೆರೆಗೆ ನಿಪಿ-1 ರಂತೆ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಗೆ ನನ್ನ ಜೊತೆ ಚಾಸಾ-1 ಮತುತ 3 ರವರು ಸಹಿ ಮಾಡಿರುತ್ತಾರೆ ಎಂದರೆಸ ರಿಯಲ್ಲ. ಸದರಿ ಸಮಯಕ್ಕೆ ಕೆಎ 18 ಎ 8523 ನೊಂದಣಿಯ ಟಾಟಾ ಏಸ್ ಗೂಡ್ಸ್ ವಾಹನ ಮತ್ತು ಕಪ್ಪು ಬಣ್ಣದ ಎರಡು ಹೋರಿ ಹಾಗೂ ಕಪ್ಪು ಬಿಳಿ ಮಿಶ್ರಿತ ಒಂದು ಹೋರಿ ಇರುತ್ತದೆ ಎಂದರೆ ಸರಿಯಲ್ಲ . ಸದರಿ ಸಮಯಕ್ಕೆ ನಿಪಿ-2 ರಿಂದ 4 ರಂತೆ ಪೊಟೋಗಳನ್ನು ತೆಗೆದರು ಎಂದರೆ ಸರಿಯಲ್ಲ

ಎಲ್ಲಾ ವಿಚಾರ ಗೊತ್ತಿದ್ದರು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೆನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ – ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ, ಚನ್ನಗಿರಿ.**

1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ**. 503/2023**

ಹೆಸರುಃ ಅಶೋಕ ಡಿ ಬಿ ಚಾಸಾಃ 3

ತಂದೆಃ ಡಿ ಹೆಚ್ ಪರಮೇಶ್ವರಪ್ಪ ಪ್ರಾಸಾ: 3

ವಯಸ್ಸುಃ 49 ವರ್ಷ

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ ದುರ್ವಿಗೆರೆ ಗ್ರಾಮ , ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 07-04-2025 ರಂದು ಪ್ರಮಾಣ ವಚನ ಭೋಧಿಸಲಾಯಿತು .

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಸಾಕ್ಷಿಯು ಈಗ ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ಮಹಜರ್ ನ್ನು ಈಗಾಗಲೇ ನಿಶಾನೆ.ಪಿ.1 ಎಂದು ಗುರುತಿಸಲಾಯಿತು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ.ಪಿ.1 (ಸಿ) ಎಂದು ಗುರುತಿಸಲಾಯಿತು. ಸುಮಾರು 2 ವರ್ಷಗಳ ಹಿಂದೆ ದುರ್ವಿಗೆರೆ ಮತ್ತು ವೀರಾಪುರ ರಸ್ತೆಯಲ್ಲಿ ಯಾವುದೇ ಪರವಾನಿಗೆ ಇಲ್ಲದೇ ಹಸುಗಳನ್ನು ಸಾಗಾಟ ಮಾಡುತ್ತಿದ್ದಾರೆ ಎಂಬ ಕಾರಣಕ್ಕೆ ಪೊಲೀಸರು ಪಂಚನಾಮೆ ಮಾಡಿದಾಗ ಸಹಿ ಮಾಡಿರುತ್ತೇನೆ. ಪಂಚನಮೆಯನ್ನು 3-00 ರಿಂದ 5-00 ಗಂಟೆವರೆಗೆ ಜರುಗಿಸಿರುತ್ತಾರೆ.

ಮಹಜರ್ ಸಮಯದಲ್ಲಿ ಪೊಲೀಸರು ಮೂರು ಭಾವಚಿತ್ರಗಳನ್ನು ತೆಗೆದಿರುತ್ತಾರೆ . ಸದರಿ ಭಾವಚಿತ್ರವನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ . ಸದರಿ ಭಾವಚಿತ್ರಗಳನ್ನು ಈಗಾಗಲೇ ನಿಪಿ.2 ರಿಂದ 4 ಎಂದು ಗುರುತಿಸಲಾಯಿತು . ಅಮಾನತುಪಡಿಸಿಕೊಂಡ ವಾಹನವನ್ನು ನೋಡಿದರೆ ಗುರುತಿಸುತ್ತೇನೆ. ಸದರಿ ವಾಹನವನ್ನು ಈಗಾಗಲೇ ಮಾಲೀಕರ

ವಶಕ್ಕೆ ನೀಡಲಾಗಿದ್ದು ಬಿಡುಗಡೆ ಪಂಚನಾಮೆಯ ಕಾಲಕ್ಕೆ ತೆಗೆದ ಭಾವಚಿತ್ರಗಳಲ್ಲಿನ ವಾಹನವನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ. ಸದರಿ ಭಾವಚಿತ್ರಗಳನ್ನು ಈಗಗಾಲೇ ನಿಪಿ 8 ಹಾಗೂ 9 ಎಂದು ಗುರುತಿಸಲಾಗಿರುತ್ತದೆ. ಅಮಾನತುಪಡಿಸಿಕೊಂಡ ಹೋರಿಗಳನ್ನ ಗೋಶಾಲೆಗೆ ಒಪ್ಪಿಸಿರುತ್ತಾರೆ. ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿತರನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯು ಮಹಜರ್ ಗೆ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಮಹಜರ್ ನ್ನು ನೋಡಲಾಗಿ ಸಾಕ್ಷಿಯು ಮಹಜರ್ ಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿನಾಂಕಃ 13-06-2022 ರಂದು ಪೊಲೀಸಿನವರು ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿ .ಅಮಾನತುಪಡಿಸಿಕೊಂಡ ವಾಹನದ ಸಂಃ ಕೆಎ 18 ಎ 8523 ಟಾಟಾ ಏಸ್ ಗೂಡ್ಸ್ ವಾಹನ ಎಂದರೆ ಸರಿ . ಅದರಲ್ಲಿ ಕಪ್ಪು ಬಣ್ಣದ ಎರಡು ಹೋರಿ ಹಾಗೂ ಕಪ್ಪು ಬಿಳಿ ಮಿಶ್ರಿತ ಒಂದು ಹೋರಿ ಇರುತ್ತದೆ ಎಂದರೆ ಸರಿ . ಪೊಲೀಸರು ಪಂಚನಾಮೆಯನ್ನು 3-45 ರಿಂದ 5-00 ಗಂಟೆವೆರೆಗೆ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿ .

**ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ –**

ಪಂಚನಾಮೆಯಲ್ಲಿ ಬರೆದ ವಿಚಾರ ನನಗೆ ಓದಿ ತಿಳಿಸಿರುವುದಿಲ್ಲ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಜರುಗಿಸಿದ ದಿನಾಂಕ ನನಗೆ ನೆನಪಿರುವುದಿಲ್ಲ. ಪಂಚನಾಮೆ ಕಾಲಕ್ಕೆ ಇಬ್ಬರು ಇದ್ದರು. ಪಂಚನಾಮೆಯ ಕಾಲಕ್ಕೆ ನಾನು ಸಹಿ ಮಾಡಿರುತ್ತೇನೆ ಉಳಿದವರು ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪಂಚನಾಮೆಗೆ ಬರುವಂತೆ ನೋಟೀಸನ್ನು ನೀಡಿರುವುದಿಲ್ಲ ಪಂಚನಾವು ಜರುಗಿಸಿದ ಸ್ಥಳದ ಚೆಕ್ಕುಬಂಧಿ ಪೂರ್ವಕ್ಕೆ ರಸ್ತೆ, ಪಶ್ಚಿಮಕ್ಕೆ ಮಂಜುನಾಥರವರ ತೋಟ, ಉತ್ತರಕ್ಕೆ ಕೆರೆ ಏರಿ , ದಕ್ಷಿಣಕ್ಕೆ ರಸ್ತೆ ಇರುತ್ತದೆ. ಮಧ್ಯಾಹ್ನ 3-00 ಗಂಟೆಯಿಂದ 5.00 ಗಂಟೆವರೆಗೆ ಪಂಚನಾಮೆ ಯನ್ನು ಜರುಗಿಸಿರುತ್ತಾರೆ. ಪೊಲೀಸರ ಕೋರಿಕೆ ಮೇರೆಗೆ ಭಾವಚಿತ್ರದಲ್ಲಿ ನಿಂತಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರ ವಿರುದ್ಧ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**
**ಚನ್ನಗಿರಿ.**